**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**

**ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 90/2020**

**ಚಾ.ಸಾಃ 04, ಪ್ರಾ.ಸಾಃ 03**

| | |
|---|---|
| ಸಾಕ್ಷಿದಾರನ ಹೆಸರು | ವೆಂಕಟೇಶ ನಾಯ್ಕ |
| ತಂದೆಯ ಹೆಸರು | ಸುರೇಶ ನಾಯ್ಕ |
| ವಯಸ್ಸು | 33 ವರ್ಷಗಳು |
| ಉದ್ಯೋಗ | ಕೂಲಿ |
| ವಾಸ್ತವ್ಯ | ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 02-02-2023 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಸಾಕ್ಷಿಗೆ ಈ ಪ್ರಕರಣದಲ್ಲಿ ಹಾಜರು ಮಾಡಿರುವ ಹಾಗೂ ಆರೋಪಿಗಳು ಕಳ್ಳತನ ಮಾಡಿರುವ ಜಾಗಗಳನ್ನು ತೋರಿಸಿದಾಗ ಜರುಗಿಸಲಾಗಿದೆ ಎಂದು ಹೇಳುವ ಪಂಚನಾಮೆಯನ್ನು ತೋರಿಸಲಾಗಿ ಅದರ ಮೇಲಿನ ಸಹಿಯನ್ನು ತನ್ನದು ಎಂದು ಸಾಕ್ಷಿ ತಿಳಿಸಿದ್ದರಿಂದ ಸದರಿ ಪಂಚನಾಮೆಯನ್ನು ನಿಪಿ-6 ಮತ್ತು ಅದರ ಮೇಲಿನ ಸಾಕ್ಷಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು 2000 ನೇ ಇಸವಿಯಲ್ಲಿ ಚಂದಾವರದಲ್ಲಿ ಕಳ್ಳತನಕ್ಕೆ ಸಂಬಂಧಿಸಿದಂತೆ ಮಾಡಿರುತ್ತೇನೆ. ಪೋಲಿಸರು ನನ್ನನ್ನು ಹೊನ್ನಾವರದಿಂದ ಚಂದಾವರಕ್ಕೆ ಕರೆದುಕೊಂಡು ಹೋಗಿದ್ದರು. ಆ ಸಂದರ್ಭದಲ್ಲಿ ನನ್ನ ಜೊತೆ ಚಾಸಾ-5 ಮಂಜುನಾಥ, ಪೋಲಿಸರು ಮತ್ತು ಇಬ್ಬರು ಆಪಾದಿತರು ಇದ್ದರು. ಅವರ ಹೆಸರುಗಳು ಗೊತ್ತಿಲ್ಲ. ಪೋಲಿಸರು ಸ್ಥಳದಲ್ಲಿ ಫೋಟೋ ತೆಗೆದಿರುತ್ತಾರೆ. ಇತರೇ ವಿಷಯಗಳು ನೆನಪಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 04-08-2020 ರಂದು ಹೊನ್ನಾವರ ಪೋಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರಾದ ಚಾಸಾ-20 ವಸಂತ ಆಚಾರರು ನಾನು ಮತ್ತು ಚಾಸಾ-5 ನ್ನು ಠಾಣೆಗೆ ಬರಮಾಡಿಕೊಂಡಿದ್ದರು ಎಂದರೆ ಸರಿಯಲ್ಲ. ನಾನು ಠಾಣೆಗೆ ಹೋದಾಗ ಅಲ್ಲಿ ಈಗ ನ್ಯಾಯಾಲಯದ ಮುಂದೆ ಇರುವ 1 ನೇ ಆರೋಪಿಯಾದ ಸಜ್ಜದ್ ಅಹ್ಮದ್ ಗಣಿ ಮತ್ತು ಗೈರುಹಾಜರಿರುವ ಮುಬಾಸಿರ್ ಕುತುಬುದ್ದೀನ್ ಗಣಿ

ಹಾಜರಿದ್ದರು ಎಂದರೆ ಸರಿಯಲ್ಲ. ಆರೋಪಿಗಳು ಹೆಬ್ಬಾನಕೇರಿಯಲ್ಲಿ ತಾವು ಕಳ್ಳತನ ಮಾಡಿದ್ದು ಸದರಿ ಜಾಗವನ್ನು ತೋರಿಸುವುದಾಗಿ ಹೇಳಿದರು ಎಂದರೆ ಸರಿಯಲ್ಲ. ನಂತರ ಆರೋಪಿಗಳು ನಮ್ಮನ್ನು ಹೆಬ್ಬಾನಕೇರಿಯಲ್ಲಿ ಇರುವ ಚಾಸಾ-1 ರವರ ಮನೆಗೆ ಕರೆದುಕೊಂಡು ಹೋಗಿ ತಾವು ಯಾವ ರೀತಿ ಕಳ್ಳತನ ಮಾಡಿರುತ್ತೇವೆ ಎನ್ನುವುದನ್ನು ತೋರಿಸಿದರು ಎಂದರೆ ಸರಿಯಲ್ಲ. ಆ ಸಂದರ್ಭದಲ್ಲಿ ಪೋಲಿಸರು ನಿಪಿ-6 ರ ಪ್ರಕಾರ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ. ಆರೋಪಿಗಳು ನಮ್ಮ ಸಮಕ್ಷಮ ಕಳ್ಳತನ ಮಾಡಿದ ಜಾಗವನ್ನು ತೋರಿಸಿದ್ದಾರೆ ಮತ್ತು ಪೋಲಿಸರು ಸ್ಥಳದಲ್ಲಿ ಪಂಚನಾಮೆ ಜರುಗಿಸಿದ್ದಾರೆ ಎಂದರೆ ಸರಿಯಲ್ಲ. ಆದರೂ ಸಹ ಈಗ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**